ಫಾರೆಸ್ಟ್ ಇಲಾಖಾ.

ಸಂದಲ್ ಹರಾಜ್ ನೋಟಿಫಿಕೇಷನ್.

ತಾರೀಖು 21ನೆ ಆಗಸ್ಟು 1909.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ—

ಮೈಸೂರು ಸರಕಾರದ ಶ್ರೀಗಂಧದ ಸಾಲೇವಾನ ನಡಿಯತೆಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಅದರ ದರ ಬಾಜೂದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಡೆಪ್ಯುಟಿ ಕಮಿಷನರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಆಫಿಸರು ಮತ್ತು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವದು.

ನಂ.	ಡಿಸ್ಟ್ರಿಕ್ಟ್.	ಕೋಠಿ.	ಹರಾಜು ತಾರೀಖು.	ಹರಾಜಿಗೆ ಇಡಲ್ಪಡುವ ಸ್ಯಾಂಡಲ್ ಮರಗಳು.	ಷರಾ.
1	ಶಿವಮೊಗ್ಗ ...	ತೀರ್ಥಹಳ್ಳಿ ...	1909ನೆ ಇಸವಿ ನವಂಬರ್ ತಾರೀಖು 18	200	
2	ಡಿಟೋ ...	ಸಾಗರ ...	ಡಿಟೋ 22	100	
3	ಡಿಟೋ ...	ಶಿವಮೊಗ್ಗ ...	ಡಿಟೋ 25	500	
4	ಕಡೂರು ...	ತರೀಕೆರೆ ...	ಡಿಟೋ 29	(a)200	(a) ಚಿತ್ರದುರ್ಗದ 10 ಟ್ಯಗಳು ಶೇರಿರುತ್ತೆ.
5	ಡಿಟೋ	ಚಿಕ್ಕಮಗಳೂರು ...	1909ನೆ ಡಿಸೆಂಬರ್ ತಾರೀಖು 2	400	
6	ಹಾಸನ ...	ಹಾಸನ ...	ಡಿಟೋ 6	200	
7	ಬೆಂಗಳೂರು ...	ಬೆಂಗಳೂರು ...	ಡಿಟೋ 9	(b)100	(b) ತುಮಕೂರು 30 ಟ್ಯಗಳು ಕೋಲಾರದ 5 ಟ್ಯಗಳು ಶೇರಿರುತ್ತೆ.
8	ಮೈಸೂರು ...	ಶ್ರೀರಂಗಪಟ್ಟಣ ...	ಡಿಟೋ 13	250	
9	ಡಿಟೋ ...	ಹುಣಸೂರು ...	ಡಿಟೋ 16	450	
			ಜುಮ್ಲಾ ...	2,400	

ಎಂ. ಮುತ್ತಣ್ಣ, ಕ್ವಸರ್ವೇಟರ್ ಆಫ್ ಫಾರೆಸ್ಟ್ಸ್, ಇನ್ ಮೈಸೂರು.

ಬೆಂಗಳೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 24ನೆ ನವಂಬರ್ 1909.

1. ಕಂದಾಯದ ಬಾಕೀದಾರರಾದ ಜೋಡಿ ಕಂಸಂದ್ರದ ರಾಮಸ್ವಾಮಿ ಅಯ್ಯಂಗಾರ್ರಿಂದ ಬರಬೇಕಾದ ಜಮ್ಮಿ ಜೋಡಿ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟು ನೆಲಮಂಗಲ ತಾಲ್ಲೂಕು ಆಫೀಸಿನಲ್ಲಿ 1910ನೆ ಇಸವಿ ಜನವರಿ 7ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ. ಚಿಕದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1908—09ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪಶೀಲ್ ವೀರಿಗೆ ರೂಪಾಯಿ 115-6-2 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲಿ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮುಂಜೂರ್ಮಾಡಲ್ಪಟ್ಟು ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪ

ಟ್ಟು ವಾಯಿದೆಯಲ್ಲಿ ಮೇಲ್ಪಟ್ಟ ಅಧಿಕಾರಿಗಳಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಬರುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ	ಬಾಕಿದಾರರ ಹೆಸರು.	ಸ್ವತ್ತಿನ ತಪ್ಪೀಲ್. ಕಟ್ಟಡಗಳು. ಸ್ವತ್ತಿನ ಹೆಸರು	ಅಂದಾಜು ಕಿಮ್ಮತ್ತು.	ಜಮೀನು. ಖುಷ್ಕಿ, ತರಿ ಅಥವಾ ಬಾಗಾಯತು	ಸರ್ವೆ ನಂಬರ್ ಅಥವಾ ಪೈಮಾಸಿನ ಹೆಸರು	ಎಷ್ಟು.	ಅಕಾರ.	ಅಂದಾಜು ಕಿಮ್ಮತ್ತು.	ಸರ್ಕಾರಕ್ಕೆ ಸಲಿಯಬೇಕಾದ ಬಾಕಿ ಜೋಡಿ ಸೊಲಗು.	ಸರ್ಕಾರಕ್ಕೆ ಬರಬೇಕಾದ ನೋಟೀಸ್ ಫೀ ಹರಾಜ್ ಫೀ ಸಹಿತವಾದ ಬಾಕಿ ಸೊಲಗು.
								ಎ. ಗು.	ರೂ. ಆ. ಪೈ.			ರೂ. ಆ. ಪೈ.
ನೆಲಮಂಗಲ	ದಾಸನಪುರ	ಜೋಡಿ ಕಂಸಂದ್ರ	ರಾಮಸ್ವಾಮಿ ಅಯ್ಯಂಗಾರ್ರು	ಸ್ವರಾಗ್ರಾನು	...							
							ಪರಂಪೋಕು ...	89 24	11 0 0			114 6 2 ಬಾಕಿ
							ಖುಷ್ಕಿ ...	469 32	315 1 6			0 8 0 ನೋಟೀಸ್
							ತರಿ ...	6 23	28 1 9			0 8 0 ಹರಾಜ್ ಫೀ
							ಬಾಗಾಯತ್ತು ...	0 5	0 4 0			115 6 2 ಮತ್ತು ಬಡ್ಡಿ ಸಹ ಬರಬೇಕು.
							ಜಮ್ಮಾ ...	566 4	354 7 3			
							ಗ್ರಾಮದ ಅಂದಾಜು ...		600 0 0			
							ಇದರಲ್ಲಿ ಕಟ್ಟಡಗಳ ಅಂದಾಜು ...		263 0 0			
									863 0 0	ರೂ. 863	ರೂ. ಆ. ಪೈ. 115 7 2	

ಟಿ. ರಾಯಲು ಚೆಟ್ಟಿ, ಫಾರ್ ಡೆಪ್ಯೂಟಿ ಕಮಿಷನರ್.

ಕೋಲಾರ ಡಿಸ್ಟ್ರಿಕ್ಟು.

ಇನ್ಸಿಹಾರ್ಮೆ.

ಚಿಕ್ಕಬಳ್ಳಾಪುರ ತಾಲ್ಲೂಕು ಕಸಬಾ ಹೋಬಳಿಗೆ ಸೇರಿದ ಜೋಡಿ ಜಡ್ಡಿವೆಂಕಟಹಳ್ಳಿ ಗ್ರಾಮವು ಸರ್ಕಾರಕ್ಕೆ ಬರಬೇಕಾದ ಬಾಕಿಗೋಸ್ಕರವಾಗಿ ಚಿಕ್ಕಬಳ್ಳಾಪುರ ತಾಲ್ಲೂಕು ಕಛೇರಿಯಲ್ಲಿ ಚಿಕ್ಕಬಳ್ಳಾಪುರ ಸಬ್ ಡಿವಿಜ್ಞ್ ಸಾಹೇಬರವರ ರೂಬರೂಬು 1909ನೆ ಇಸವಿ ಡಿಸೆಂಬರು 13ನೆ ತಾರೀಖು ದಿವಸ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹೆಚ್ಚಿನ ತಪಶೀಲ್ ಬಗ್ಗೆ 1909ನೆ ಇಸವಿ ನವಂಬರ್ 18ನೆ ಮಕ್ರುಂ ಮೈಸೂರು ಗೆಜೆಟ್ಟಿನ 2ನೆ ಭಾಗದ 863ನೆ ನಂಬರ್ ಪೇಜು ನೋಡತಕ್ಕದ್ದು.

ತಾರೀಖು 17ನೆ ನವಂಬರ್ 1909.

ಚಿಕ್ಕಬಳ್ಳಾಪುರ ತಾಲ್ಲೂಕು ಮಂಡಿಕಲ್ಲು ಹೋಬಳಿಗೆ ಸೇರಿದ ಕಾಯಂಗುತ್ತಾ ಚೀಗಾನಹಳ್ಳಿ ಗ್ರಾಮವು ಸರ್ಕಾರಕ್ಕೆ ಬರಬೇಕಾದ ಬಾಕಿಗೋಸ್ಕರವಾಗಿ ಚಿಕ್ಕಬಳ್ಳಾಪುರ ತಾಲ್ಲೂಕು ಕಛೇರಿಯಲ್ಲಿ ಚಿಕ್ಕಬಳ್ಳಾಪುರ ಸಬ್ ಡಿವಿಜ್ಞ್ ಆಫಿಸರವರ ರೂಬರೂಬು 1909ನೆ ಡಿಸೆಂಬರ್ ಮಾಹೆ 20ನೆ ತಾರೀಖು ದಿವಸ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹೆಚ್ಚಿನ ತಪಶೀಲ್ ಬಗ್ಗೆ 1909ನೆ ಇಸವಿ ನವಂಬರ್ 25ನೆ ಮಕ್ರುಂ ಮೈಸೂರು ಗೆಜೆಟ್ಟಿನ 2ನೆ ಭಾಗದ 869-870ನೆ ಪೇಜುಗಳನ್ನು ನೋಡತಕ್ಕದ್ದು.

ಎ. ವೇದಾಂತದೇಶಿಕಂ ಐಯ್ಯಂಗಾರ್, ಫಾರ್ ಡೆಪ್ಯೂಟಿ ಕಮಿಷನರ್.

ಬೆಂಗಳೂರು ಸಬ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ರ 1909-10ನೆ ಇಸವಿ ಮಿ॥ ಅರ್ಜೀ ನಂಬರ್ 281.

ಬೆಂಗಳೂರಲ್ಲಿ ಬಹಳವಾಗಿ ವ್ಯಾಪಾರ ಮಾಡುತ್ತಿದ್ದು ತಿರುಜನಾಪಲ್ಲೀಲಿ ಮೃತಪಟ್ಟ ಕೊಮಾರಸ್ವಾಮಿ ನಾಯಿಡು ಆಸ್ತೀ ವಿಷಯದಲ್ಲಿ—

ಅರ್ಜೀದಾರು ಲಕ್ಷ್ಮೀನಾರಾಯಣಸ್ವಾಮಿನಾಯಿಡು ವಗೈರೇರು ಮೃತಪಟ್ಟ ಸದರಿ ಕೊಮಾರಸ್ವಾಮಿ ನಾಯಿಡುಯವರಿಗೆ ಮುಖ್ಯವಾರಸ್ದಾರು ಆಗಬೇಕೆಂಬ ಹಕ್ಕುದಾರಿಮೇಲೆ ಬೆಂಗಳೂರು ಸ್ಥಳದ ವಾಸಸ್ಥರಾಗಿ ಮೃತಪಟ್ಟ ಕೊಮಾರಸ್ವಾಮಿ ನಾಯಿಡರಜೆಂದಗಿ ಬರ್ಯಾಗಿ ಬರತಕ್ಕ ರೂಪಾಯಿ (1,930—8—0 ಸಾಲವನ್ನು ವಸೂಲ್ ಮಾಡುವದಕ್ಕೆ 1901ನೆ ಇಸವಿ 7ನೆ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಿದ 1ನೆ ಲಕ್ಷ್ಮೀನಾರಾಯಣಸ್ವಾಮಿ ನಾಯಿಡು, 2ನೆ ವೀರರಾಘವಲು ನಾಯಿಡು, 3ನೆ ಗೋವಿಂದರಾಜುಲು ನಾಯಿಡು 2-3ನೆ ಮೈನರ್, ಗಾರ್ಡಿಯರ್ 1ನೆ ಅರ್ಜೀದಾರ್ರ ಅರ್ಜಿಯನ್ನು ಸ್ರ 1909ನೆ ಇಸವಿ ಡಿಸೆಂಬರು ತಿಂಗ